ಕರ್ನಾಟಕ ಸರ್ಕಾರ

ಸಂಖ್ಯೆ: ಟಿಡಿ 07 ಟಿಸಿಎಸ್ 2021

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:16-03-2021.

**ಇಂದ:**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ,
ಬೆಂಗಳೂರು.

**ಇವರಿಗೆ:**
1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಹುಬ್ಬಳ್ಳಿ.
4. ವ್ಯವಸ್ಥಾಪಕ ನಿರ್ದೇಶಕರು, ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಕಲಬುರಗಿ.

**ಮಾನ್ಯರೆ,**

**ವಿಷಯ:** ಸಾರಿಗೆ ಸಂಸ್ಥೆಗಳಲ್ಲಿ ತರಬೇತಿಯಲ್ಲಿರುವ ನೌಕರರ ತರಬೇತಿ ಅವಧಿಯನ್ನು 02 ವರ್ಷದಿಂದ 01 ವರ್ಷಕ್ಕೆ ಇಳಿಸುವ ಕುರಿತು.

**ಉಲ್ಲೇಖ:** ವ್ಯವಸ್ಥಾಪಕ ನಿರ್ದೇಶಕರು, ಕರಾರಸಾನಿಗಮ ರವರ ಪತ್ರ ಸಂಖ್ಯೆ:ಕರಾರಸಾ/ಕೇಕ/ಕಾರ್ಮಿಕ/14/20-21,ದಿನಾಂಕ:13.01.2021

*****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿನ ಸಾರಿಗೆ ಸಂಸ್ಥೆಗಳ ನೌಕರರ ಬೇಡಿಕೆಗಳ ಪೈಕಿ ನಾಲ್ಕು ಸಾರಿಗೆ ಸಂಸ್ಥೆಗಳಲ್ಲಿ ತರಬೇತಿಯಲ್ಲಿರುವ ನೌಕರರ ತರಬೇತಿ ಅವಧಿಯನ್ನು ಎರಡು ವರ್ಷಗಳಿಂದ ಒಂದು ವರ್ಷಕ್ಕೆ ಇಳಿಸುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು, ನಾಲ್ಕು ಸಾರಿಗೆ ಸಂಸ್ಥೆಗಳಲ್ಲಿ ತರಬೇತಿಯಲ್ಲಿರುವ ನೌಕರರ ತರಬೇತಿ ಅವಧಿಯನ್ನು ಜುಲೈ-2021 ರಿಂದ ಜಾರಿಗೆ ಬರುವಂತೆ ಎರಡು ವರ್ಷಗಳಿಂದ ಒಂದು ವರ್ಷಕ್ಕೆ ಇಳಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ ಎಂದು ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:FD/95/EX11/2021 (e),
ದಿನಾಂಕ:15-03-2021ರಲ್ಲಿ ಸಹಮತಿಸಿರುವಂತೆ )

16/3/2021
(ಎಂ. ಸತ್ಯವತಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಾರಿಗೆ ಇಲಾಖೆ.

Scanned with CamScanner